**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : 2019–20ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ(ದ್ವಿಭಾಷಾ ಮಾಧ್ಯಮ) ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ :
1. 2018–19ನೇ ಸಾಲಿನ (ಜುಲೈ) ಆಯವ್ಯಯ ಭಾಷಣದ ಕಂಡಿಕೆ (50)
2. ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ದಿನಾಂಕ:05.09.2018.
3. ನಿರ್ದೇಶಕರು, ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಬೆಂಗಳೂರು ಇವರ ಪತ್ರ ಸಂಖ್ಯೆ:RIE/Govt-KT/1000 Eng.Med School/2018-19/223, ದಿನಾಂಕ:17.09.2018.
4. ಸರ್ಕಾರದ ಆದೇಶ ಸಂಖ್ಯೆ:ಇಡಿ 109 ಯೋಯೋಕ 2018, ದಿನಾಂಕ:26.10.2018.
5. ದಿನಾಂಕ:15.03.2019ರಂದು ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಆಂಗ್ಲ ಮಾಧ್ಯಮ ಶಾಲೆಗಳು, ಕರ್ನಾಟಕ ಪಬ್ಲಿಕ್ ಶಾಲೆಗಳು ಹಾಗೂ ಪೂರ್ವ ಪ್ರಾಥಮಿಕ ಶಾಲೆಗಳ ಸ್ಥಾಪನೆ ಕುರಿತ ಸಭೆಯ ನಡವಳಿ.

C.NO 1503
22 MAY 2019
SSA 59279 21/5/19

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ 2018–19ನೇ ಸಾಲಿನ (ಜುಲೈ) ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿರುತ್ತಾರೆ.

*"ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮ ತರಗತಿಗಳ ಜೊತೆಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಆರಂಭಿಸಲಾಗುವುದು. ಇದರಿಂದ ಹೆಚ್ಚು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಆಕರ್ಷಿಸಬಹುದಾಗಿದೆ. ಆರಂಭಿಕವಾಗಿ 1000 ಶಾಲೆಗಳಲ್ಲಿ ಇಂತಹ ಪ್ರಯೋಗ ನಡೆಸಲಾಗುವುದು"*

ಮೇಲೆ ಓದಲಾದ ಕ್ರಮಾಂಕ (2) ರ ಸರ್ಕಾರದ ಆದೇಶದಲ್ಲಿ, 2018–19ನೇ ಸಾಲಿನಿಂದ ರಾಜ್ಯದ ಒಂದು ಸಾವಿರ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮ ತರಗತಿಗಳ ಜೊತೆಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಆರಂಭಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ನಿರ್ದೇಶಕರು, ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಬೆಂಗಳೂರು ಇವರು ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ವಿಸ್ತೃತ ವರದಿ ನೀಡಿದ್ದು, ಆಂಗ್ಲಭಾಷೆಯಲ್ಲಿ ಪರಿಣಾಮಕಾರಿಯಾಗಿ ಬೋಧಿಸಬಲ್ಲ ಶಿಕ್ಷಕರನ್ನು ಗುರುತಿಸಿ, ಅವರಿಗೆ ಉತ್ತಮ ತರಬೇತಿ ನೀಡಿ ಪ್ರಾಯೋಗಿಕವಾಗಿ ಒಂದು ಸಾವಿರ ಶಾಲೆಗಳಲ್ಲಿ 1ನೇ ತರಗತಿಯಿಂದಲೇ ಆಂಗ್ಲ ಮಾಧ್ಯಮವನ್ನು ಪ್ರಾರಂಭಿಸಲು ಕ್ರಿಯಾಯೋಜನೆ ಸಿದ್ಧಪಡಿಸಿ ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

...2



Generated from eOffice by SHARANAPPA TIMMAPUR, EP-PrimaryA-SA(ST), SENIOR ASSISTANT, EP-Sec on 24/05/2024 12:03 PM

ಮೇಲೆ ಓದಲಾದ ಕ್ರಮಾಂಕ(4)ರ ಆದೇಶದಲ್ಲಿ, 2018-19ನೇ ಸಾಲಿನ ಆಯವ್ಯಯ ಘೋಷಣೆಯಂತೆ, ರಾಜ್ಯಾದ್ಯಂತ ಒಂದು ಸಾವಿರ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು 1ನೇ ತರಗತಿಯಿಂದ ಆಂಗ್ಲ ಮಾಧ್ಯಮ ತರಗತಿ ಪ್ರಾರಂಭಿಸಲು ಆಯ್ಕೆಮಾಡಿ, ಆಯ್ಕೆಗೊಂಡ ಶಾಲೆಗಳ ಶಿಕ್ಷಕರಿಗೆ ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆಯ ಮೂಲಕ 15 ದಿನಗಳ ಪ್ರವೇಶ ತರಬೇತಿ ನೀಡುವಂತೆ ಹಾಗೂ ಇಂಗ್ಲೀಷ್ ಮಾಧ್ಯಮ ತರಗತಿ ಪ್ರಾರಂಭಿಸಲು ಅಗತ್ಯವಾದ ಪಠ್ಯವಸ್ತು, ಪಠ್ಯಪುಸ್ತಕಗಳು ಹಾಗೂ ಇ-ಕಂಟೆಂಟ್‌ಗಳನ್ನು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಸಂಸ್ಥೆಯು ಸಿದ್ಧಪಡಿಸುವಂತೆ ಸೂಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(5)ರ ನಡವಳಿಯಲ್ಲಿ ಸೂಚಿಸಿದಂತೆ, ಈ ಕೆಳಕಂಡ ಮಾನದಂಡದನ್ವಯ 1000 ಶಾಲೆಗಳನ್ನು ಆಯ್ಕೆಮಾಡಲಾಗಿದೆ.

1. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕನಿಷ್ಠ 4 ಶಾಲೆಗಳು ಇರುವಂತೆ ಹಾಗೂ ಇವುಗಳಲ್ಲಿ ಕನಿಷ್ಠ ಒಂದಾದರೂ ವಿಧಾನ ಸಭಾ ಕ್ಷೇತ್ರದ ಕೇಂದ್ರದ ಪ್ರಮುಖ ಸ್ಥಾನಗಳಲ್ಲಿ ಇರುವುದು.
2. ಈಗಾಗಲೇ 2018-19ನೇಸಾಲಿನಲ್ಲಿ ಪ್ರಾರಂಭಿಸಲಾದ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹಾಗೂ 2019-20ನೇ ಸಾಲಿನಲ್ಲಿ ಪ್ರಾರಂಭಿಸಲು ಆಯ್ಕೆ ಮಾಡಿರುವ 100 ಕರ್ನಾಟಕ ಪಬ್ಲಿಕ್ ಶಾಲೆಗಳು ಸಹಿತ 1000 ಶಾಲೆಗಳ ಪಟ್ಟಿಯಲ್ಲಿ ಸೇರುವಂತೆ ಆಯ್ಕೆ ಮಾಡುವುದು.
3. ಒಂದೇ ಆವರಣದಲ್ಲಿ 1 ರಿಂದ 10ನೇ ತರಗತಿಗಳು ನಡೆಯುತ್ತಿರುವ ಶಾಲೆಗಳಿಗೆ ಪ್ರಥಮಾದ್ಯತೆ ನೀಡುವುದು.
4. ಒಂದೇ ಆವರಣದಲ್ಲಿ 1 ರಿಂದ 10ನೇ ತರಗತಿಯಗಳು ನಡೆಯುವ ಶಾಲೆಗಳು ಲಭ್ಯವಿಲ್ಲದೆ ಇದ್ದಲ್ಲಿ, ಮಕ್ಕಳ ದಾಖಲಾತಿ ಹೆಚ್ಚಿರುವ 1 ರಿಂದ 8ನೇ ತರಗತಿ ನಡೆಯುವ ಶಾಲೆಗಳಿಂದ 100 ಮೀ. ಇಂದ 500 ಮಿ. ವ್ಯಾಪ್ತಿಗೊಳಗಿರುವ ಪ್ರೌಢಶಾಲೆಗಳಿದ್ದಲ್ಲಿ, ಅಂತಹ ಶಾಲೆಗಳನ್ನು ಆಯ್ಕೆ ಮಾಡುವುದು.

ಮೇಲ್ಕಂಡ ಮಾನದಂಡಗಳನ್ನಾಧರಿಸಿ, 1000 ಇಂಗ್ಲಿಷ್ ಮಾಧ್ಯಮ ಶಾಲೆಗಳ ಪಟ್ಟಿಯನ್ನು ಸಿದ್ಧಪಡಿಸಿ, ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು ಇವರು ಪ್ರಸ್ತಾವನೆಯನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ಬೆಂಗಳೂರು, ದಿನಾಂಕ:18/05/2019</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅನುಬಂಧದಲ್ಲಿನ ರಾಜ್ಯದ ಒಂದು ಸಾವಿರ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ 2019-20ನೇ ಸಾಲಿನಿಂದ ಕನ್ನಡ ಮಾಧ್ಯಮದೊಂದಿಗೆ 1ನೇ ತರಗತಿಯಿಂದಲೇ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ (ದ್ವಿಭಾಷಾ ಮಾಧ್ಯಮ) ತರಗತಿಗಳನ್ನು ಪ್ರಾರಂಭಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಅನುಮತಿ ನೀಡಿ ಆದೇಶಿಸಿದೆ.

**<u>ಷರತ್ತುಗಳು:</u>**

1. ಪ್ರಸ್ತುತ, 1ನೇ ತರಗತಿಗೆ ಮಾತ್ರ ಆಂಗ್ಲ ಮಾಧ್ಯಮ ಪ್ರಾರಂಭಿಸಿ, ಮುಂದಿನ ವರ್ಷಗಳಲ್ಲಿ ಮುಂದಿನ ತರಗತಿಗೆ ವಿಸ್ತರಿಸತಕ್ಕದ್ದು.

...3



... by SHARANAPPA TIMMAPUR, EP-Primary-SA(ST), SENIOR ASSISTANT, EP-Sec on 24/05/2024 12:03 PM

2. ಸದರಿ 1000 ಆಂಗ್ಲ ಮಾಧ್ಯಮ ವಿಭಾಗಗಳಲ್ಲಿ ಇಂಗ್ಲಿಷ್ ಹಾಗೂ ಗಣಿತ ವಿಷಯಗಳಿಗೆ ಕೇಂದ್ರ ಪಠ್ಯಮಸ್ತಕ (ಎನ್.ಸಿ.ಇ.ಆರ್.ಟಿ) ಗಳನ್ನು ಹಾಗೂ ಪರಿಸರ ಅಧ್ಯಯನ ಮತ್ತು ಕನ್ನಡ ವಿಷಯಗಳಿಗೆ ಕರ್ನಾಟಕ ಪಠ್ಯ ಪುಸ್ತಕ ಸಂಘದ ಪಠ್ಯಪುಸ್ತಕಗಳನ್ನು ಅನುಸರಿಸತಕ್ಕದ್ದು. ಈ ವಿಭಾಗಗಳಲ್ಲಿ ಪರಿಸರ ಅಧ್ಯಯನ ಹಾಗೂ ಗಣಿತ ವಿಷಯಗಳಿಗೆ ದ್ವಿಭಾಷೆಯಲ್ಲಿ (ಬೈ-ಲಿಂಗ್ವಲ್) ಪಠ್ಯಮಸ್ತಕಗಳನ್ನು ಅಳವಡಿಸತಕ್ಕದ್ದು.

3. ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ ಇವರು ಮೇಲೆ ತಿಳಿಸಿದ ಪುಸ್ತಕಗಳಿಗೆ ಎನ್.ಸಿ.ಇ.ಆರ್.ಟಿ ರವರ ಕೃತಿಸ್ವಾಮ್ಯ (Copyright) ಪಡೆದು, 1ನೇ ತರಗತಿಯ ಗಣಿತ ವಿಷಯದ ಪಠ್ಯಮಸ್ತಕಗಳನ್ನು ಕನ್ನಡ ಭಾಷೆಗೆ ಭಾಷಾಂತರಿಸಿ, ಸದರಿ ಗಣಿತ ಪಠ್ಯ ಪುಸ್ತಕ ಹಾಗೂ ರಾಜ್ಯ ಪಠ್ಯಕ್ರಮದ ಪರಿಸರ ಅಧ್ಯಯನ ಪಠ್ಯಮಸ್ತಕಗಳನ್ನು ದ್ವಿಭಾಷೆಯಲ್ಲಿ ಮುದ್ರಿಸತಕ್ಕದ್ದು.

4. ತರಗತಿಯಲ್ಲಿ ಬೋಧನೆ ಮತ್ತು ಕಲಿಕೆಯ ಪ್ರಕ್ರಿಯೆಯು ಕೇವಲ ಪಠ್ಯಮಸ್ತಕಕ್ಕೆ ಸೀಮಿತವಾಗಿರದೆ ಕಲಿಕಾ ಫಲಿತಗಳನ್ನಾಧರಿಸಿದ (Learning Outcome based) ಚಟುವಟಿಕೆ ಆಧಾರಿತವಾಗಿರತಕ್ಕದ್ದು.

5. ಪ್ರಾದೇಶಿಕ ಆಂಗ್ಲ ಭಾಷಾ ತರಬೇತಿ ಸಂಸ್ಥೆ (ದಕ್ಷಿಣ ಭಾರತ) (RIESI) ಮತ್ತು ಅಜೀಂ ಪ್ರೇಮ್‌ಜಿ ಪ್ರತಿಷ್ಠಾನದ ಸಹಯೋಗದೊಂದಿಗೆ ಶಿಕ್ಷಕರಿಗೆ ಪಠ್ಯಮಸ್ತಕದ ಜೊತೆಗೆ ಶಿಕ್ಷಕರ ಕೈಪಿಡಿ, ಕಲಿಕಾ ಬೋಧನಾ ಸಾಮಗ್ರಿಗಳು ಹಾಗೂ ಸ್ಮಾರ್ಟ್ ತರಗತಿಗಳಲ್ಲಿ ಬೋಧಿಸಲು ಅನುಕೂಲವಾಗುವಂತೆ ಧ್ವನಿ ಮತ್ತು ದೃಶ್ಯಗಳನ್ನೊಳಗೊಂಡ ಇ-ಪಠ್ಯವಸ್ತುವನ್ನು ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು ಇವರು ಅಭಿವೃದ್ಧಿಪಡಿಸತಕ್ಕದ್ದು.

6. ಆಯ್ಕೆಗೊಂಡ 1000 ಶಾಲೆಗಳಲ್ಲಿ ಪ್ರತಿ ಶಾಲೆಗೆ ಒಬ್ಬರು ಶಿಕ್ಷಕರಿಗೆ ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆಯ ಮೂಲಕ 15 ದಿನಗಳ ಪ್ರವೇಶ ತರಬೇತಿ ನೀಡತಕ್ಕದ್ದು ಮತ್ತು ಪ್ರತಿ ತಿಂಗಳು ಸಂಸ್ಥೆಯೊಂದಿಗೆ ವಿಡಿಯೋ ಸಮ್ಮೇಳನ ನಡೆಸತಕ್ಕದ್ದು. ಈ ಉದ್ದೇಶಕ್ಕೆ ತಗಲುವ ವೆಚ್ಚವನ್ನು ಸಂಸ್ಥೆಗೆ ಒದಗಿಸಲಾಗುವ ಅನುದಾನದಲ್ಲಿ ನಿಯಮಾನುಸಾರ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 796 ವೆಚ್ಚ-8 2018, ದಿನಾಂಕ:08.08.2018 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಯೋಇ 59 ಜಶ 2018, ದಿನಾಂಕ:06.08.2018 ರಲ್ಲಿ ನೀಡಿದ ಸಹಮತದನ್ವಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03.04.2019ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

...4



Generated from eOffice by SHARANAPPA TIMMAPUR, EP-PrimaryA-SA(ST), SENIOR ASSISTANT, EP-Sec on 24/05/2024 12:03 PM